RNU AIR DHARWAD

JULY 30, 2025

## AKASHAVANI - DHARWAD

## PRADESH SAMACHARA (KANNADA) 12.00 P.M.

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ರಾಜ್ಯದಲ್ಲಿ ಈ ತನಕ,** ಒಟ್ಟು 6 ಲಕ್ಷದ 24 ಸಾವಿರ ಇ–ಖಾತೆಗಳನ್ನು ವಿತರಿಸಲಾಗಿದ್ದು, ಇ–ಖಾತೆ ಮೂಲಕ ಭೂ ಮಾಲಿಕರು ಸ್ಪಷ್ಟವಾದ, ಡಿಜಟಲ್ ದಾಖಲೆಗಳನ್ನು ಯಾವುದೇ ಮಧ್ಯವರ್ತಿಗಳ ಸಹಾಯವಿಲ್ಲದೆ ಪಡೆಯಬಹುದಾಗಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ ಹೇಳಿದ್ದಾರೆ. ಈ ಬಗ್ಗೆ ತಮ್ಮ ಎಕ್ಸ್ ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಡಿಜಿಟಲ್ ಇ–ಖಾತೆ ಎಂಬುದು ಕೇವಲ ದಾಖಲೆಯಲ್ಲ, ಇದು ಪ್ರತಿ ಕುಟುಂಬದ ಗೌರವ, ಹಕ್ಕು ಹಾಗೂ ಸುರಕ್ಷೆ. ಇ–ಖಾತೆ ಹಂಚಿಕೆ ನಾಗರಿಕರಿಗೆ ಸರ್ಕಾರದ ಮೇಲಿನ ನಂಬಿಕೆಯನ್ನು ಹೆಚ್ಚಿಸಿದೆ ಎಂದಿದ್ದಾರೆ.

<><><>

**ಪ್ರಧಾನಮಂತ್ರಿ ಜನ ಸುರಕ್ಷಾ ವಿಮೆ** ಯೋಜನೆ, ಅಟಲ್ ಪಿಂಚಣಿ ಯೋಜನೆ ಸೇರಿದಂತೆ, ಸಾಮಾಜಿಕ ಭದ್ರತಾ ಯೋಜನೆಗಳಲ್ಲಿ ಒಳಗೊಳ್ಳುವಿಕೆಯನ್ನು ಖಾತ್ರಿಪಡಿಸಿ, ಪೂರ್ಣತೆ ಸಾಧಿಸಲು, ಕೊಪ್ಪಳ ಜಿಲ್ಲೆ ಕುಕನೂರು ತಾಲೂಕಿನ, ಮಂಗಳೂರು ಗ್ರಾಮದಲ್ಲಿ, ಕರ್ನಾಟಕ ಗ್ರಾಮೀಣ ಬ್ಯಾಂಕ್ ಹಾಗೂ ಲೀಡ್ ಬ್ಯಾಂಕ್ ಸಹಯೋಗದಲ್ಲಿ ಮಾಹಿತಿ ಹಾಗೂ ನೋಂದಣಿ ಶಿಬಿರ ಆಯೋಜಿಸಲಾಯಿತು. ಕರ್ನಾಟಕ ಗ್ರಾಮೀಣ ಬ್ಯಾಂಕ್, ಮಂಗಳೂರು ಶಾಖೆ ವ್ಯವಸ್ಥಾಪಕರಾದ ಸಮೀರ ಹುನಗುಂದ, ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ.

<><><>

**ಇಂದು ಸಂಜೆ, 5:40 ಕ್ಕೆ** ಆಂಧ್ರಪ್ರದೇಶದ ಶ್ರೀಹರಿಕೋಟಾದಿಂದ, ನಿಸಾರ ಉಪಗ್ರಹ ಹೊತ್ತ ಜಿ.ಎಸ್.ಎಲ್.ವಿ–ಎಫ್–16 ರಾಕೆಟ್ ಉಡಾವಣೆಯಾಗಲಿದೆ. ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ –ಇಸ್ರೋ ಹಾಗೂ ಅಮೆರಿಕದ ನಾಸಾ ಸಂಸ್ಥೆ ಜಂಟಿಯಾಗಿ, ರಡಾರ್ ತಂತ್ರಜ್ಞಾನದೊಂದಿಗೆ ನಿಸಾರ ಉಪಗ್ರಹವನ್ನು ಅಭಿವೃದ್ಧಿಪಡಿಸಿವೆ. ಉಡ್ಡಯನದ ನೇರ ಪ್ರಸಾರವು ಬೆಂಗಳೂರು ಜವಾಹರಲಾಲ್ ನೆಹರು ತಾರಾಲಯ, ವಿಶ್ವೇಶರಾಯ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ವಿಜ್ಞಾನ ಮತ್ತು ತಂತ್ರಜ್ಞಾನ ಖಾತೆ ಸಚಿವ ಎನ್.ಎಸ್ ಬೋಸರಾಜು ಎಕ್ಸ್ ಮಾಧ್ಯಮದ ಮೂಲಕ ತಿಳಿಸಿದ್ದಾರೆ.

<><><>

**ಮಾದಕ ವಸ್ತುಗಳ ಅಕ್ರಮ ಸಾಗಾಣಿಕೆ,** ಮಾರಾಟ ಹಾಗೂ ಅವುಗಳ ಬಳಕೆ ಸಂಪೂರ್ಣವಾಗಿ ನಿಯಂತ್ರಿಸಲು, ಎಲ್ಲ ಇಲಾಖೆಗಳು ಸಮನ್ವಯದೊಂದಿಗೆ ಕಾರ್ಯನಿರ್ವಹಿಸಬೇಕು ಎಂದು ಕೋಲಾರ ಜಿಲ್ಲಾಧಿಕಾರಿ ಡಾಕ್ಟರ್ ಎಂ.ಆರ್ ರವಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಆಯೋಜಿತ, ಎನ್.ಸಿ.ಓ.ಆರ್.ಡಿ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಮಾದಕ ವಸ್ತುಗಳ ಬಳಕೆಯಿಂದ ದೇಹದ ಮೇಲಾಗುವ ದು ್ಪರಿಣಾಮಗಳ ಬಗ್ಗೆ ಅರಿವು ಮೂಡಿಸಿ. ಇವುಗಳಿಂದ ದೂರ ಉಳಿಯುವಂತೆ ಜಾಗೃತಿ ಕಾರ್ಯಕ್ರಮಗಳು ಹಾಗೂ ಸ್ಪರ್ಧೆಗಳನ್ನು ಶಿಕ್ಷಣ ಸಂಸ್ಥೆಗಳಲ್ಲಿ ಆಯೋಜಿಸಲಾಗುವುದು ಎಂದರು.

<><><>

**ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು,** ಆಗಸ್ಟ್ 1 ರಂದು, ಕೇಂದ್ರ ಮಾಹಿತಿ ಮತ್ತು ತಂತ್ರಜ್ಞಾನ ಇಲಾಖೆ ವತಿಯಿಂದ ಹೊಸದಿಲ್ಲಿಯಲ್ಲಿ ಆಯೋಜಿತ "ಬ್ರಿಡ್ಜ್ –ಟು – ಬೆಂಗಳೂರು" ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ಆಗಸ್ಟ್ 2 ರಂದು ಬೆಳಗ್ಗೆ ಎಐಸಿಸಿ ಕಾನೂನು, ಮಾಹಿತಿ ಹಕ್ಕು ವಿಭಾಗ, ವಿಜ್ಞಾನ ಭವನದಲ್ಲಿ ಆಯೋಜಿಸಿರುವ 'ಸಾಮಾಜಿಕ ನ್ಯಾಯ, ಡಾಕ್ಟರ್ ಬಿ.ಆರ್. ಅಂಬೇಡ್ಕರ್ ಅವರ ದೃಷ್ಟಿಕೋನ' ವಿಚಾರ ಸಂಕಿರಣದಲ್ಲಿ ಭಾಗವಹಿಸಲಿದ್ದಾರೆ.

<><><>

**ಸತತ ಮಳೆ ಹಿನ್ನೆಲೆ ಉತ್ತರ** ಕನ್ನಡ ಜಿಲ್ಲೆ, ಸೂಪಾ ಅಣೆಕಟ್ಟು ಭರ್ತಿಯಾಗಿದ್ದು, ಹೆಚ್ಚುವರಿ ನೀರನ್ನು ಹೊರಬಿಡುವ ಸಾಧ್ಯತೆಯಿರುವುದರಿಂದ, ಕಾಳಿ ನದಿ ಪಾತ್ರದ ಜನರು ಹಾಗೂ ಸಾರ್ವಜನಿಕರು ಮುನ್ನೆಚ್ಚರಿಕೆ ಪಾಲಿಸಬೇಕು ಎಂದು ಕಾಳಿ ಪವರ್ ಕಾರ್ಪೋರೇಶನ ಅಧಿಕಾರಿಗಳು ತಿಳಿಸಿದ್ದಾರೆ.

<><><>

**ಬೀದರ ಜಿಲ್ಲೆ ಭಾಲ್ಕಿ ತಾಲೂಕು,** ಹರಣಾಳ–ಡಾವರಗಾಂವ್ ಮಾರ್ಗವಾಗಿ ಕುರುಬಖೇಳಗಿ ಗ್ರಾಮದವರೆಗಿನ, 6 ಕೋಟಿ 90 ಲಕ್ಷ ರೂಪಾಯಿ ರಸ್ತೆ ನಿರ್ಮಾಣ ಕಾಮಗಾರಿಗೆ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ.ಖಂಡ್ರೆ ಭೂಮಿಪೂಜೆ ನೆರವೇರಿಸಿದರು.

<><><>

**ವಿಜಯನಗರ ಜಿಲ್ಲೆ, ಕೊಟ್ಟೂರು** ತಾಲೂಕು, ಉಜ್ಜಿನಿ ಗ್ರಾಮದಲ್ಲಿ ಆಯೋಜಿಸಲಾದ ತಾಲೂಕು ಮಟ್ಟದ ಜನಸ್ಪಂದನ ಕಾರ್ಯಕ್ರಮದಲ್ಲಿ ಕೂಡ್ಲಿಗಿ ಶಾಸಕ ಡಾಕ್ಟರ ಎನ್.ಟಿ ಶ್ರೀನಿವಾಸ ಪಾಲ್ಗೊಂಡರು, ವಿವಿಧ ಇಲಾಖೆಗಳ 180 ಅಹವಾಲುಗಳನ್ನು ಸ್ವೀಕರಿಸಲಾಯಿತು.

<><><>

**ಹುಬ್ಬಳ್ಳಿಯ ತಬೀಬ ಲ್ಯಾಂಡ್** ಬಡಾವಣೆಯಲ್ಲಿ ಸ್ಥಾಪಿಸಲಾದ ಇಂದಿರಾ ಕ್ಯಾಂಟೀನ್ ಅನ್ನು ಶಾಸಕ ಪ್ರಸಾದ ಅಬ್ಬಯ್ಯ ಉದ್ಘಾಟಿಸಿದರು.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ**

<><><>